ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಕಿರಿಯ ತರಬೇತಿ ಅಧಿಕಾರಿಗಳ ನೇಮಕಾತಿ

370 (792) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ): ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಕೆ.ಪಿ.ಎಸ್.ಸಿ.ಯಿಂದ ನೇಮಕಾತಿ ಮಾಡುವಾಗ ಅಭ್ಯರ್ಥಿಗಳು ಅರ್ಹತೆ ಸಲುವಾಗಿ ಸಲ್ಲಿಸುವ ಅನುಭವ ಪ್ರಮಾಣ ಪತ್ರಗಳ ನೈಜತೆಗಳನ್ನು ಪರಿಶೀಲಿಸುವ ಜವಾಬ್ದಾರಿ ಕೆ.ಪಿ.ಎಸ್.ಸಿ.ಯದೇ ಅಥವಾ ಇಲಾಖೆಯದೇ ;

ಆ) ಪರಿಶೀಲಿಸುವ ಅಧಿಕಾರ ಇಲಾಖೆಯದಾಗಿದ್ದಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಎಲ್‌ಡಿ/116/ಇಟಿಐ/2010 ಬಗ್ಗೆ ಇಲಾಖೆಯು ಕೈಗೊಂಡ ಕ್ರಮವೇನು ; ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

ಇ) ಕಳೆದ ಮೂರು ವರ್ಷಗಳಲ್ಲಿ ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಕೆ.ಪಿ.ಎಸ್.ಸಿ.ಯಿಂದ ನೇಮಕಾತಿ ಮಾಡಿದ ಎಲ್ಲಾ ಅಭ್ಯರ್ಥಿಗಳ ಅನುಭವ ಪ್ರಮಾಣ ಪತ್ರಗಳನ್ನು ಪರಿಶೀಲಿಸಲಾಗಿದೆಯೇ (ಅಭ್ಯರ್ಥಿಗಳ ಅನುಭವ ಪ್ರಮಾಣ ಪತ್ರಗಳ ಪ್ರತಿಯನ್ನು ಒದಗಿಸುವುದು) ?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಕರ್ನಾಟಕ ಲೋಕಸೇವಾ ಆಯೋಗವು ಕಾರ್ಯಾನೆ ಮತ್ತು ಬಾಯ್ಲರುಗಳ ಇಲಾಖೆಯ ಸೇವೆ ಪಡೆದು ಆಯ್ಕೆಯಾದ ಅಭ್ಯರ್ಥಿಗಳ ಅನುಭವ ಪ್ರಮಾಣಪತ್ರಗಳ ನೈಜತೆಗಳನ್ನು ಪರಿಶೀಲಿಸುತ್ತದೆ.

ಆ) ಕೆ.ಪಿ.ಎಸ್.ಸಿ.ಯು ಆಯ್ಕೆ ಪಟ್ಟಿಯ ಜೊತೆ ಆಯ್ಕೆಯಾದವರ ಅರ್ಜಿಗಳು ಹಾಗೂ ಜೆರಾಕ್ಸ್ ಅನುಭವ ಪ್ರಮಾಣ ಪತ್ರಗಳ ಪ್ರತಿಗಳನ್ನು ಒದಗಿಸಿರುತ್ತಾರೆ. ಈ ಅರ್ಜಿಗಳಲ್ಲಿ ಇರುವ ಜೆರಾಕ್ಸ್ ಪ್ರತಿಗಳು ಹಾಗೂ ಅಭ್ಯರ್ಥಿಗಳು ಒದಗಿಸಿದ ಮೂಲ ಪ್ರಮಾಣ ಪತ್ರಗಳು ಹೊಂದಾಣಿಕೆಯಾಗುತ್ತವೆಯೇ ಎಂದು ಇಲಾಖೆಯಲ್ಲಿ ಪರಿಶೀಲಿಸಲಾಗುವುದು. ಉಲ್ಲೇಖಿತ ಪತ್ರದಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ಹಾಜರಾದ ಅಭ್ಯರ್ಥಿಗಳು ಒದಗಿಸಿದ ಅನುಭವ ಪ್ರಮಾಣ ಪತ್ರಗಳು ಹಾಗೂ ಕೆ.ಪಿ.ಎಸ್.ಸಿ.ಯಿಂದ

ಒದಗಿಸಿದ ಅನುಭವ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳು ಹೊಂದಾಣಿಕೆಯಾಗುವ ಬಗ್ಗೆ ಪರಿಶೀಲಿಸಲಾಗಿದೆ. ಪ್ರತಿಗಳನ್ನು ಲಗತ್ತಿಸಿದೆ.

ಅರಣ್ಯ ಪ್ರದೇಶ ಹಾಗೂ ಪ್ರಾಣಿ ಪಕ್ಷಿಗಳ ಸಂರಕ್ಷಣೆ

371 (794) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅರಣ್ಯ ಪ್ರದೇಶವನ್ನು ಸಂರಕ್ಷಿಸುವ ಬಗ್ಗೆ ರಾಜ್ಯ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

ಆ) ಸಾಕಷ್ಟು ಅರಣ್ಯ ಪ್ರದೇಶಗಳಲ್ಲಿ ಪ್ರಾಣಿ ಪಕ್ಷಿಗಳು ನಿರಂತರವಾಗಿ ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಪ್ರಾಣಿ ಪಕ್ಷಿಗಳನ್ನು ಸಂರಕ್ಷಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

ಇ) ಸಾಕಷ್ಟು ಪ್ರಾಣಿಗಳು ಇತ್ತೀಚೆಗೆ ಗ್ರಾಮ ಮತ್ತು ಪಟ್ಟಣಗಳಲ್ಲಿ ಕಂಡು ಬಂದು ಹಲವು ರೈತರ ಜಮೀನುಗಳನ್ನು ನಾಶಪಡಿಸಿರುವ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

ಈ) ರಾಜ್ಯದಲ್ಲಿ ಅರಣ್ಯ ಅಭಿವೃದ್ಧಿಗೆ ಸರ್ಕಾರ 2010-11ರಲ್ಲಿ ಮೀಸಲಿಟ್ಟಿದ್ದ ಹಣವೆಷ್ಟು ; ಯಾವ ಯಾವ ಜಿಲ್ಲೆಯ ಅರಣ್ಯ ಪ್ರದೇಶಕ್ಕೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):

ಅ) ಅರಣ್ಯ ಪ್ರದೇಶವನ್ನು ಸಂರಕ್ಷಿಸಲು ಇಲಾಖೆ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.

1. ಅರಣ್ಯ ಪ್ರದೇಶಗಳನ್ನು ಕಾರ್ಯಯೋಜನೆ ಮತ್ತು ಮೋಜಣಿ ಘಟಕದ ಮುಖಾಂತರ ಮೋಜಣಿ ಮಾಡಿ ಬಂದು ಕಲ್ಲುಗಳನ್ನು ಹಾಕಲಾಗುತ್ತಿದೆ.
2. ಅರಣ್ಯ ಪ್ರದೇಶದ ಕಾರ್ಯ ನಿರ್ವಾಹಕ ರಕ್ಷಣಾ ಸಿಬ್ಬಂದಿಗೆ ಆಧುನಿಕ ತಂತ್ರಜ್ಞಾನದ ವಾಕಿಟಾಕಿ ಮೊಬೈಲ್ ಮುಂತಾದ ಉಪಕರಣಗಳನ್ನು ನೀಡುವುದಲ್ಲದೆ ನಿಸ್ತಂತು ಉಪಕರಣಗಳನ್ನು ಸಹ ಅಳವಡಿಸಲಾಗಿದೆ.